ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೃಷಿ ಇಲಾಖೆಯ ಕಾರ್ಯಕ್ರಮಗಳ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :-

313 (367) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ 2019-20 ನೇ ಸಾಲಿನ ಕೃಷಿಯ ಪ್ರೋತ್ಸಾಹಕ್ಕಾಗಿ ಸರ್ಕಾರದಿಂದ ಹಮ್ಮಿಕೊಂಡ ಕಾರ್ಯಕ್ರಮಗಳು ಯಾವುವು ; ಇವುಗಳಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; ಬಾಕಿಯಿರುವ ಅನುದಾನವೆಷ್ಟು ; ಬಿಡುಗಡೆ ಮಾಡಲು ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು ಕಾರ್ಯಕ್ರಮವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ 2020-21ನೇ ಸಾಲಿನ ಕೃಷಿಯ ಪ್ರೋತ್ಸಾಹಕ್ಕಾಗಿ ಸರ್ಕಾರದಿಂದ ಹಮ್ಮಿಕೊಂಡ ಕಾರ್ಯಕ್ರಮಗಳು ಯಾವುವು ; ಇವುಗಳಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ವೆಚ್ಚ ಮಾಡಲಾದ ಅನುದಾನವೆಷ್ಟು ; ಬಾಕಿಯಿರುವ ಅನುದಾನವೆಷ್ಟು ; ಬಿಡುಗಡೆ ಮಾಡಲು ಬಾಕಿಯಿರುವ ಅನುದಾನವೆಷ್ಟು ; (ಜಿಲ್ಲಾವಾರು ಕಾರ್ಯಕ್ರಮವಾರು ಮಾಹಿತಿಯನ್ನು ಒದಗಿಸುವುದು)

(ಇ) ಕರಾವಳಿ ಜಿಲ್ಲೆಗಳಲ್ಲಿ ರೈತರು ಕೃಷಿ ಕೂಲಿ ಕಾರ್ಮಿಕರ ಕೊರತೆಯಿಂದ ಕೃಷಿ ಯಾಂತ್ರೀಕರಣ ಪ್ರೋತ್ಸಾಹಕ್ಕಾಗಿ ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುತ್ತದೆ, ಈ ಸಾಲಿನಲ್ಲಿ ಈ ಯೋಜನೆಯಲ್ಲಿ ಎಷ್ಟು ಫಲಾನಭವಿಗಳನ್ನು ಆಯ್ಕೆಮಾಡಲಾಗಿರುತ್ತದೆ ; ಬಿಡುಗಡೆಯಾಗಿರುವ ಅನುದಾನವೆಷ್ಟು; ವೆಚ್ಚಮಾಡಲಾಗಿರುವ ಅನುದಾನೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು? (ಜಿಲ್ಲಾವಾರು ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)